Akashvani : Bangalore
National Bulletin In Kannada
23.02.2025 / 7.35 am
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

23.02.2025 / 7.35 am

<><*<><>*><>

ಮುಖ್ಯಾಂಶಗಳು

೧. ಮನ್ ಕಿ ಬಾತ್‌ನ ೧೧೯ನೇ ಆವೃತ್ತಿಯಲ್ಲಿಂದು ದೇಶ ವಿದೇಶಗಳಲ್ಲಿರುವ ಭಾರತೀಯರೊಂದಿಗೆ ಪ್ರಧಾನಿ ಮನದ ಮಾತು

೨. ಮಧ್ಯಪ್ರದೇಶಕ್ಕಿಂದು ಪ್ರಧಾನಿ ನರೇಂದ್ರ ಮೋದಿ ಭೇಟಿ; ಬಗೇಶ್ವರ ಧಾಮ್ ವೈದ್ಯಕೀಯ ಮತ್ತು ವಿಜ್ಞಾನ ಸಂಶೋಧನಾ ಸಂಸ್ಥೆಗೆ ಶಂಕುಸ್ಥಾಪನೆ

೩. ಆರೋಗ್ಯ ರಕ್ಷಣೆ ಮೂಲಭೂತ ಹಕ್ಕೇ ಹೊರತು ವಿಶೇಷ ಸವಲತ್ತಲ್ಲ - ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್

೪. ಐಸಿಸಿ ಚಾಂಪಿಯನ್ಸ್ ಟ್ರೋಫಿ: ದುಬೈನಲ್ಲಿಂದು ಭಾರತ- ಪಾಕಿಸ್ತಾನ ಹಣಾಹಣಿ

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಇಂದು ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೧೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಯಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದಿನಿಂದ ಮಧ್ಯಪ್ರದೇಶ, ಬಿಹಾರ ಮತ್ತು ಅಸ್ಸಾಂ ರಾಜ್ಯಗಳಿಗೆ ಮೂರು ದಿನಗಳ ಭೇಟಿ ನೀಡಲಿದ್ದಾರೆ. ಮಧ್ಯಪ್ರದೇಶದ ಛತ್ತರ್‌ಪುರ ಜಿಲ್ಲೆಯಲ್ಲಿ

ಬಗೇಶ್ವರ ಧಾಮ್ ವೈದ್ಯಕೀಯ ಮತ್ತು ವಿಜ್ಞಾನ ಸಂಶೋಧನಾ ಸಂಸ್ಥೆಗೆ ಇಂದು ಅವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಈ ಕುರಿತು ಒಂದು ವರದಿ

೧೦ ಹೆಕ್ಟೇರ್ ಪ್ರದೇಶದಲ್ಲಿ ಸುಮಾರು ೨೧೮ ಕೋಟಿ ರೂಪಾಯಿ ವೆಚ್ಚದಲ್ಲಿ ವೈದ್ಯಕೀಯ ಮತ್ತು ವಿಜ್ಞಾನ ಸಂಶೋಧನಾ ಸಂಸ್ಥೆಯನ್ನು ನಿರ್ಮಾಣ ಮಾಡಲಾಗುತ್ತಿದ್ದು, ಮೊದಲ ಹಂತದಲ್ಲಿ ೧೦೦ ಹಾಸಿಗೆಯ ಸಾಮರ್ಥ್ಯ ಹೊಂದಿರಲಿದೆ. ವಿಶೇಷವೆಂದರೆ ಅತ್ಯಾಧುನಿಕ ವೈದ್ಯಕೀಯ ವ್ಯವಸ್ಥೆ ಹೊಂದಿರುವ ಈ ಆಸ್ಪತ್ರೆಯಲ್ಲಿ ಬಡ ಕ್ಯಾನ್ಸರ್ ರೋಗಿಗಳಿಗೆ ಉಚಿತವಾಗಿ ಚಿಕಿತ್ಸೆ ದೊರಕಲಿದೆ. ಬಳಿಕ ಪ್ರಧಾನಿ, ಭೋಪಾಲ್‌ನಲ್ಲಿ ಎರಡು ದಿನಗಳ ಜಾಗತಿಕ ಹೂಡಿಕೆದಾರರ ಶೃಂಗಸಭೆ ೨೦೨೫ ಅನ್ನು ಉದ್ಘಾಟಿಸಲಿದ್ದಾರೆ. ಇಂದು ಸಂಜೆ ಭೋಪಾಲ್‌ದಲ್ಲಿ ಪ್ರಧಾನಿ, ರಾಜ್ಯ ಬಿಜೆಪಿ ಘಟಕದ ಸಂಸದರು, ಶಾಸಕರು ಹಾಗೂ ಇತರ ಸ್ಥಳೀಯ ಮುಖಂಡರೊಂದಿಗೆ ಸಂವಾದ ನಡೆಸಲಿದ್ದಾರೆ.

ನಾಳೆ ಅವರು, ಬಿಹಾರದ ಭಗಲ್ಪುರದಲ್ಲಿ ಪಿಎಂ ಕಿಸಾನ್ ಯೋಜನೆಯ ೧೯ ನೇ ಕಂತನ್ನು ಬಿಡುಗಡೆ ಮಾಡಲಿದ್ದಾರೆ ಹಾಗೂ ಬಿಹಾರದಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ ಲೋಕಾರ್ಪಣೆ ಮಾಡಲಿದ್ದಾರೆ. ನಂತರ ಅವರು ಗುವಾಹಟಿಗೆ ಪ್ರಯಾಣ ಬೆಳೆಸಲಿದ್ದು, ಮೆಗಾ ಜುಮೊಯಿರ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಇದು ಚಹಾ ಉದ್ಯಮದ ೨೦೦ ವರ್ಷಗಳ ಪಯಣ ಮತ್ತು ಅಸ್ಸಾಂನಲ್ಲಿ ೨೦೦ ವರ್ಷಗಳ ಕೈಗಾರಿಕೀಕರಣದ ಸಂಕೇತವಾಗಿದೆ. ಗುವಾಹಟಿಯಲ್ಲಿ ಅಡ್ವಾಂಟೇಜ್ ಅಸ್ಸಾಂ ೨.೦ ಹೂಡಿಕೆ ಮತ್ತು ಮೂಲಸೌಕರ್ಯ ಶೃಂಗಸಭೆ ೨೦೨೫ ಅನ್ನು ಮಂಗಳವಾದಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಉದ್ಘಾಟಿಸಲಿದ್ದಾರೆ.

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನ್ ಕರ್ ಅವರು ರಾಜಸ್ತಾನದ ಜೈಪುರಕ್ಕೆ ಇಂದು ಒಂದು ದಿನದ ಭೇಟಿ ನೀಡಲಿದ್ದಾರೆ. ಭೇಟಿ ವೇಳೆ ಅವರು ಜೈಪುರ ರಾಷ್ಟ್ರೀಯ ವಿಶ್ವವಿದ್ಯಾಲಯದ ೧೪ನೇ ಘಟಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

<><*<><>*><>

ಆರೋಗ್ಯ ರಕ್ಷಣೆ ಮೂಲಭೂತ ಹಕ್ಕೇ ಹೊರತು ವಿಶೇಷ ಸವಲತ್ತಲ್ಲ ಎಂದು ವಿದೇಶಾಂಗ ಸಚಿವ ಡಾ. ಜೈಶಂಕರ್ ಒತ್ತಿ ಹೇಳಿದರು. ನವದೆಹಲಿಯಲ್ಲಿ ನಿನ್ನೆ ನಡೆದ ೧೨ನೇ ಅಂತರರಾಷ್ಟ್ರೀಯ ಆರೋಗ್ಯ ಸಂವಾದವನ್ನು ಉದ್ದೇಶಿಸಿ ಮಾತನಾಡಿದ ಅವರು, ಜಾಗತಿಕ ದಕ್ಷಿಣದಲ್ಲಿ ಅನಿಶ್ಚಿತ

ಪೂರೈಕೆ ಸರಪಳಿಗಳು ಮತ್ತು ಜಾಗತಿಕ ಆರ್ಥಿಕತೆಯ ಏರಿಳಿತಗಳು ಆರೋಗ್ಯ ಸೌಲಭ್ಯಕ್ಕೆ ಅಡ್ಡಿಯಾಗಬಾರದು ಎಂದು ತಿಳಿಸಿದರು. ಭಾರತವು ಜಾಗತಿಕ ಮಟ್ಟದಲ್ಲಿ ಅಭಿವೃದ್ಧಿ ಪಾಲುದಾರಿಕೆಯಲ್ಲಿ, ಪೂರೈಕೆ ಸರಪಳಿ ಕೊಂಡಿಯಾಗಿ ಹಾಗೂ ಆರೋಗ್ಯ ತುರ್ತು ಪರಿಸ್ಥಿತಿಗಳಲ್ಲಿ ಸೌಲಭ್ಯ ಒದಗಿಸುವುದರ ಜೊತೆಗೆ ಆರೋಗ್ಯ ಭದ್ರತೆ ನೀಡುವಲ್ಲಿ ಮಹತ್ವದ ಕೊಡುಗೆ ನೀಡಿದೆ ಎಂದು ತಿಳಿಸಿದರು. ಕೋಟ್ಯಂತರ ನಾಗರಿಕರಿಗೆ ಆಯುಷ್ಮಾನ್ ಭಾರತ್ ಆರೋಗ್ಯ ವಿಮೆಯಂತಹ ಉಪಕ್ರಮಗಳು ಸೌಲಭ್ಯ ಪಡೆದಿದ್ದಾರೆ ಎಂದು ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ.

<><*<><>*><>

ಸಹಕಾರ ಶಿಕ್ಷಣದ ಬಲವರ್ಧನೆಗೆ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಸಹಕಾರ ಸಚಿವ ಅಮಿತ್ ಶಾ ನಿನ್ನೆ ಪ್ರತಿಪಾದಿಸಿದ್ದಾರೆ. ಪುಣೆಯಲ್ಲಿ ಸಹಕಾರಿ ಕ್ಷೇತ್ರದ ಪಶ್ಚಿಮ ವಲಯ ಮಂಡಳಿಯ ೨೭ನೇ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ನಿಟ್ಟಿನಲ್ಲಿ ಅಗತ್ಯ ಮಸೂದೆ ತರಲಾಗುವುದು ಎಂದು ಪ್ರಕಟಿಸಿದರು. ಇದಕ್ಕೂ ಮುನ್ನ ಅವರು, ಪುಣೆಯಲ್ಲಿ ನಿನ್ನೆ ಜನತಾ ಸಹಕಾರಿ ಬ್ಯಾಂಕ್ ನ ವಜ್ರ ಮಹೋತ್ಸವ ಸಮಾರಂಭ ಉದ್ದೇಶಿಸಿ ಮಾತನಾಡಿದರು.  ಕೇಂದ್ರ ಸರ್ಕಾರದ ಪ್ರಯತ್ನಗಳಿಂದಾಗಿ ಕಳೆದ ಮೂರು ವರ್ಷಗಳಲ್ಲಿ ಸಹಕಾರಿ ವಲಯ ಮಹತ್ವದ ಪಡೆದಿದ್ದು, ದೈತ್ಯ ಮಾರುಕಟ್ಟೆ ಶಕ್ತಿಯಾಗಿ ರೂಪುಗೊಂಡಿದೆ. ಪುಣೆಯಲ್ಲಿ ಸಹಕಾರಿ ಸಂಘಗಳ ಕೇಂದ್ರ ರಿಜಿಸ್ಟ್ರಿಯ ಮೊದಲ ಕಚೇರಿ ತೆರೆಯಲಾಗುವುದು ಎಂದು ಹೇಳಿದರು.

<><*<><>*><>

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ನಡೆಸಿದ ನೂರು ದಿನಗಳ ಕ್ಷಯಾರೋಗ ನಿರ್ಮೂಲನಾ ಅಭಿಯಾನದ ಮೂಲಕ ದೇಶಾದ್ಯಂತ ೫ ಲಕ್ಷಕ್ಕೂ ಹೆಚ್ಚು ಟಿಬಿ ರೋಗಿಗಳನ್ನು ಪತ್ತೆಹಚ್ಚಲಾಗಿದೆ.  ಇದುವರೆಗೆ ೧೦ ಕೋಟಿಗೂ ಹೆಚ್ಚು ದುರ್ಬಲ ವ್ಯಕ್ತಿಗಳನ್ನು ಪರೀಕ್ಷೆಗೆ ಒಳಪಡಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ತಿಳಿಸಿದೆ. ಈ ಅಭಿಯಾನದಡಿ ೧೦ ಲಕ್ಷ ನಿ-ಕ್ಷಯಾ ಶಿಬಿರಗಳ ಸ್ಥಾಪನೆ ಮೂಲಕ ಆಧುನಿಕ ಟಿಬಿ ರೋಗ ನಿರ್ಣಯ ಸಾಧನಗಳನ್ನು ಜನರ ಮನೆ ಬಾಗಿಲಿಗೆ ಕೊಂಡೊಯ್ಯಲಾಗಿದೆ.

<><*<><>*><>

ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೇರ್ ಲೆಹೆನ್  ಈ ತಿಂಗಳ ೨೭ ರಿಂದ ಭಾರತಕ್ಕೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಇದು ಅವರ ಮೂರನೇ ಭಾರತ ಭೇಟಿಯಾಗಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ೨೦೦೪ ರಿಂದ ಭಾರತ ಮತ್ತು ಯೂರೋಪ್ ತಂತ್ರಗಾರಿಕಾ ಪಾಲುದಾರರಾಗಿದ್ದು, ವಿವಿಧ ವಲಯಗಳಲ್ಲಿ ದ್ವಿಪಕ್ಷೀಯ ಬಾಂಧವ್ಯ

ವರ್ಧಿಸಿದೆ. ಉರ್ಸುಲಾ ಅವರ ಈ ಭೇಟಿಯು ಈ ಬಾಂಧವ್ಯವನ್ನು ಇನ್ನಷ್ಟು ಗಟ್ಟಿಗೊಳಿಸುವ ನಿರೀಕ್ಷೆಯಿದೆ.

<><*<><>*><>

ಸಾರ್ವಜನಿಕ ಆಡಳಿತದಲ್ಲಿ ಶ್ರೇಷ್ಠತೆಗಾಗಿ ನೀಡುವ ಪ್ರಧಾನಮಂತ್ರಿಗಳ ಪ್ರಶಸ್ತಿ-೨೦೨೪ ಕ್ಕೆ ಒಂದೂವರೆ ಸಾವಿರ ನಾಮನಿರ್ದೇಶನಗಳನ್ನು ಸ್ವೀಕರಿಸಲಾಗಿದೆ. ಈ ಪ್ರಶಸ್ತಿಗಳು ಸಾರ್ವಜನಿಕ ಸೇವಕರ ಕೊಡುಗೆಗಳನ್ನು ಮೂರು ವಿಭಾಗಗಳಲ್ಲಿ ಗುರುತಿಸಲಿದೆ. ಇದಲ್ಲದೇ ನಾವಿನ್ಯತಾ ವಿಭಾಗದಲ್ಲಿ ಆರು ಪ್ರಶಸ್ತಿಗಳನ್ನು ನೀಡಲಾಗುವುದು. ಈ ಪ್ರಶಸ್ತಿಗಾಗಿ ೭೧೦ ಜಿಲ್ಲೆಗಳು ನೋಂದಾಯಿಸಿಕೊಂಡಿವೆ. ನವದೆಹಲಿಯಲ್ಲಿ ನಾಗರಿಕ ಸೇವೆಗಳ ದಿನವಾದ ಏಪ್ರಿಲ್ ೨೧ ರಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

<><*<><>*><>

ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಚ್ಯಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಪಂದ್ಯಾವಳಿಯ ಎ ಗುಂಪಿನ ಪಂದ್ಯದಲ್ಲಿ ಭಾರತ, ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಅಪರಾಹ್ನ ೨.೩೦ಕ್ಕೆ ಆರಂಭವಾಗಲಿದೆ.

ಈ ಕುರಿತು ಒಂದು ವರದಿ

ರೋಹಿತ್ ಶರ್ಮಾ ನೇತೃತ್ವದ ಭಾರತ ತಂಡ ಬುಧವಾರ ಬಾಂಗ್ಲಾದೇಶ ವಿರುದ್ಧ ಆರು ವಿಕೆಟ್‌ಗಳ ಭರ್ಜರಿ ಜಯ ಸಾಧಿಸುವ ಮೂಲಕ ತನ್ನ ಅಭಿಯಾನವನ್ನು ಆರಂಭಿಸಿತು. ಮತ್ತೊಂದೆಡೆ, ಕರಾಚಿಯಲ್ಲಿ ನಡೆದ ತನ್ನ ಮೊದಲ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಪಾಕಿಸ್ತಾನ ತಂಡ ನ್ಯೂಜಿಲೆಂಡ್ ವಿರುದ್ಧ ೬೦ ರನ್‌ಗಳ ಸೋಲನುಭವಿಸಿತು. ಭಾರತ ಇಂದು ಗೆದ್ದರೆ ಎಂಟು ತಂಡಗಳ ಟೂರ್ನಿಯ ಸೆಮಿಫೈನಲ್‌ಗೆ ತನ್ನ ಸ್ಥಾನವನ್ನು ಭದ್ರಪಡಿಸಿಕೊಳ್ಳಲಿದ್ದು, ಸೆಮಿಫೈನಲ್ ಹಂತಕ್ಕೆ ಮುನ್ನಡೆಯಲು ಪಾಕಿಸ್ತಾನಕ್ಕೆ ಇದು ಮಾಡು ಇಲ್ಲವೇ ಮಡಿ ಪಂದ್ಯವಾಗಿದೆ. ೨೦೧೭ ರ ಚಾಂಪಿಯನ್ಸ್ ಟ್ರೋಫಿ ಫೈನಲ್ ನಂತರ ಪಾಕಿಸ್ತಾನದ ವಿರುದ್ಧದ ಕೊನೆಯ ಆರು ಮುಖಾಮುಖಿಗಳಲ್ಲಿ ಐದರಲ್ಲಿ ಗೆದ್ದಿರುವ ಭಾರತ ಗೆಲುವಿನ ನೆಚ್ಚಿನ ತಂಡವಾಗಿ ಕಣಕ್ಕಿಳಿಯುತ್ತಿದೆ.

ಆದಾಗ್ಯೂ, ಒಟ್ಟಾರೆ ಮುಖಾಮುಖಿಗಳಲ್ಲಿ ಭಾರತ ೫೭ ರಲ್ಲಿ ಗೆಲುವು ಸಾಧಿಸಿದ್ದು, ೭೩ ಪಂದ್ಯಗಳನ್ನು ಗೆಲ್ಲುವ ಮೂಲಕ ಪಾಕಿಸ್ತಾನ ಮೇಲುಗೈ ಸಾಧಿಸಿದೆ. ಕಳೆದ ದಶಕದಲ್ಲಿ ವಿಶೇಷವಾಗಿ ೨೦೧೫ ರಿಂದೀಚೆಗೆ ಭಾರತ ೨೦೧೭ ರ ಚಾಂಪಿಯನ್ಸ್ ಟ್ರೋಫಿ ಫೈನಲ್‌ನಲ್ಲಿ ಪಾಕಿಸ್ತಾನದ ವಿರುದ್ಧ ಕೇವಲ ಒಂದು ಪಂದ್ಯವನ್ನು ಸೋತಿದ್ದು, ಏಳು ಪಂದ್ಯಗಳಲ್ಲಿ ವಿಜಯೀಯಾಗಿದೆ. ಏಕದಿನ ಅಂತರರಾಷ್ಟ್ರೀಯ ಮತ್ತು ವಿಶ್ವಕಪ್ ಮುಖಾಮುಖಿಗಳ ಸಂದರ್ಭದಲ್ಲಿ, ಭಾರತ ಪ್ರಬಲ

ಶಕ್ತಿಯಾಗಿದ್ದು, ಪಾಕಿಸ್ತಾನದ ವಿರುದ್ಧ ೧೩ ಪಂದ್ಯಗಳಲ್ಲಿ ೧೦ ರಲ್ಲಿ ಗೆದ್ದಿದೆ. ಆದಾಗ್ಯೂ, ಚಾಂಪಿಯನ್ಸ್ ಟ್ರೋಫಿಯ ಉಭಯ ತಂಡಗಳ ನಡುವಿನ ೫ ಮುಖಾಮುಖಿಗಳಲ್ಲಿ ಪಾಕಿಸ್ತಾನ ಮೂರರಲ್ಲಿ ಗೆದ್ದಿದ್ದರೆ, ಭಾರತ ಎರಡು ಪಂದ್ಯಗಳನ್ನು ತನ್ನದಾಗಿಸಿಕೊಂಡಿದೆ.

<><*<><>*><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಯುಪಿ ವಾರಿಯರ್ಸ್ ತಂಡ ೩೩ ರನ್‌ಗಳಿಂದ ಗೆಲುವು ಸಾಧಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಯುಪಿ ವಾರಿಯರ್ಸ್, ನಿಗದಿ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೭೭ ರನ್ ಗಳಿಸಿತು. ೧೭೮ ರನ್‌ಗಳ ಗುರಿ ಬೆನ್ನತ್ತಿದ ಡೆಲ್ಲಿ ಕ್ಯಾಪಿಟಲ್ಸ್, ೧೯.೩ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೪೪ ರನ್ ಗಳಿಸಲಷ್ಟೇ ಶಕ್ತವಾಯಿತು. ನಾಳೆ ಇದೇ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಯುಪಿ ವಾರಿಯರ್ಸ್ ತಂಡ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>